ಕರ್ನಾಟಕ ಸರ್ಕಾರ

# ಕಾಲೇಜು ಶಿಕ್ಷಣ ಇಲಾಖೆ

ದೂರವಾಣಿ: 080-22343904/05

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು-560001.

ಸಂಖ್ಯೆ: ಕಾಶಿಇ/ಶೈವಿ/04/ಸುತ್ತೋಲೆ/2022-23

ದಿನಾಂಕ:

## ಸುತ್ತೋಲೆ

ವಿಷಯ: 'ಜಾಗೃತಿ ಅರಿವು ಸಪ್ತಾಹ – 2022' (Vigilance Awareness Week-2022) ನ್ನು ಆಚರಿಸುವ ಬಗ್ಗೆ.

ಉಲ್ಲೇಖ: ಸರ್ಕಾರದ ಸುತ್ತೋಲೆ ಸಂ:ಸಿಆಸುಇ/79/ಸೇಲೋಯು/2022. ಬೆಂಗಳೂರು ದಿನಾಂಕ:12.10.2022.

* * * * * *

ಸಾರ್ವಜನಿಕ ಆಡಳಿತದ ಎಲ್ಲಾ ಕ್ಷೇತ್ರಗಳಲ್ಲಿ ಭ್ರಷ್ಟಾಚಾರವನ್ನು ತೊಲಗಿಸಿ, ಉತ್ತಮ ಆಡಳಿತಕ್ಕಾಗಿ ಪಾರದರ್ಶಕ ನೀತಿಗಳನ್ನು ರೂಪಿಸಿ ಅವುಗಳನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸಲು ಮತ್ತು ಇಂದಿನ ವ್ಯವಸ್ಥೆಯನ್ನು ಸುಧಾರಿಸಲು ಸಂಬಂಧಪಟ್ಟವರೆಲ್ಲರನ್ನು ಒಗ್ಗೂಡಿಸಿ ಭ್ರಷ್ಟಚಾರದ ವಿರುದ್ಧ ಜಾಗೃತಿ ಮೂಡಿಸಲು ದಿನಾಂಕ:31.10.2022 ರಿಂದ 06.11.2022 ರವರೆಗೆ 'ಜಾಗೃತಿ ಅರಿವು ಸಪ್ತಾಹ' (Vigilance Awareness Week) ಆಚರಿಸುವಂತೆ ಉಲ್ಲೇಖಿತ ಸರ್ಕಾರದ ಸುತ್ತೋಲೆಯಲ್ಲಿ ಸೂಚಿಸಲಾಗಿದ್ದು, ಈ ವರ್ಷದ ಜಾಗೃತಿ ಅರಿವು ಸಪ್ತಾಹದ ವಿಷಯವು "Corruption Free India for a Developed Nation" ಆಗಿರುತ್ತದೆ. ಅದರಂತೆ, ಉಲ್ಲೇಖಿತ ಸರ್ಕಾರದ ಸುತ್ತೋಲೆ ಹಾಗೂ ಪ್ರತಿಜ್ಞೆಯ ಮಾದರಿ ಪ್ರತಿಯನ್ನು ಈ ಪತ್ರದೊಂದಿಗೆ ಲಗತ್ತಿಸಿ, ರವಾನಿಸುತ್ತಾ, ಸದರಿ ಸುತ್ತೋಲೆಯಲ್ಲಿ ತಿಳಿಸಿರುವಂತೆ ತಮ್ಮ ಕಛೇರಿಯ ವ್ಯಾಪ್ತಿಯ ಸರ್ಕಾರಿ/ಖಾಸಗಿ ಅನುದಾನಿತ ಕಾಲೇಜುಗಳಲ್ಲಿ 'ಜಾಗೃತಿ ಅರಿವು ಸಪ್ತಾಹ-2022" (Vigilance Awareness Week-2022) ಆಚರಿಸಲು ಅವಶ್ಯ ಕ್ರಮ ಕೈಗೊಳ್ಳುವಂತೆ ಹಾಗೂ ಈ ಸಪ್ತಾಹಕ್ಕೆ ಚಾಲನೆ ನೀಡಲು ಜಾಗೃತಿ ಅರಿವು ಸಪ್ತಾಹವನ್ನು ದಿನಾಂಕ:31.10.2022 ರ ಪೂರ್ವಾಹ್ನ 11.00 ಗಂಟೆಗೆ ಒಂದು ಪ್ರತಿಜ್ಞೆಯನ್ನು (ಇದಕ್ಕೆ ಲಗತ್ತಿಸಿದ ಮಾದರಿಯಲ್ಲಿ) ತೆಗೆದುಕೊಂಡು ಪ್ರಸ್ತುತ ಕೋವಿಡ್-19 ಹಿನ್ನಲೆಯಲ್ಲಿ ಕಾಲೇಜುಗಳಲ್ಲಿ ಮುಂಜಾಗೃತಾ ಕ್ರಮಗಳನ್ನು ಕಡ್ಡಾಯವಾಗಿ ಪಾಲಿಸಿ ಕಾರ್ಯಕ್ರಮವನ್ನು ಆಚರಿಸಲು ಪ್ರಾಂಶುಪಾಲರಿಗೆ ಸೂಚಿಸಲು ತಿಳಿಸಿದೆ.

"ಜಾಗೃತಿ ಅರಿವು ಸಪ್ತಾಹ-2022" ವನ್ನು ಆಚರಿಸಿದ ಬಗ್ಗೆ ತಮ್ಮ ಕಛೇರಿ ವ್ಯಾಪ್ತಿಯ ಸರ್ಕಾರಿ ಮತ್ತು ಖಾಸಗಿ ಅನುದಾನಿತ ಕಾಲೇಜುಗಳಿಂದ ಕ್ರೋಢೀಕೃತ ಅನುಪಾಲನಾ ವರದಿಯನ್ನು ಸಪ್ತಾಹ ಮುಗಿದ ಒಂದು ವಾರದೊಳಗೆ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ (ಜಾಗೃತ ವಿಭಾಗ), ಕೊಠಡಿ ಸಂಖ್ಯೆ:114, ಮೊದಲನೇ ಮಹಡಿ, ವಿಕಾಸಸೌಧ, ಬೆಂಗಳೂರು-01 ಇಲ್ಲಿಗೆ ಕಡ್ಡಾಯವಾಗಿ ಸಲ್ಲಿಸುವಂತೆಯೂ ಸಹ ಸೂಚಿಸಲಾಗಿದೆ.

ಅಡಕ: ಪ್ರತಿಜ್ಞೆ ಪ್ರತಿ

ಕಾಲೇಜು ಶಿಕ್ಷಣ ನಿರ್ದೇಶಕರು

ಇವರಿಗೆ : ಮಾಹಿತಿ ಹಾಗೂ ಅಗತ್ಯಕ್ರಮಕ್ಕಾಗಿ.

1. ಪ್ರಾದೇಶಿಕ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ ಮತ್ತು ಕಲಬುರಗಿ – ತಮ್ಮ ಕಛೇರಿಯ ವ್ಯಾಪ್ತಿಗೆ ಬರುವ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ರವಾನಿಸಲು ಸೂಚಿಸಲಾಗಿದೆ.
2. ರಾಜ್ಯದ ಎಲ್ಲಾ ಸರ್ಕಾರಿ, ಮತ್ತು ಖಾಸಗಿ ಅನುದಾನಿತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ– ಜಂಟಿ ನಿರ್ದೇಶಕರ ಮುಖಾಂತರ

ಪ್ರತಿಯನ್ನು:

1) ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರದ ಸಚಿವಾಲಯ, ವಿಕಾಸಸೌಧ ಬೆಂಗಳೂರು–560001.
2) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ) ಬಹು ಮಹಡಿಗಳ ಕಟ್ಟಡ, ಬೆಂಗಳೂರು–01.
3) ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಮಾಹಿತಿ ತಂತ್ರಜ್ಞಾನ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು– ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸಲು ತಿಳಿಸಲಾಗಿದೆ.
4) ಕಛೇರಿ ಪ್ರತಿ.

# ಪ್ರತಿಜ್ಞೆ

ನಮ್ಮ ದೇಶದ ಆರ್ಥಿಕ, ರಾಜಕೀಯ ಮತ್ತು ಸಾಮಾಜಿಕ ಅಭಿವೃದ್ಧಿಗೆ ಭ್ರಷ್ಟಾಚಾರವು ಒಂದು ಪ್ರಮುಖ ಅಡಚಣೆಯಾಗಿದೆಯೆಂದು ನಾನು ನಂಬುತ್ತೇನೆ. ಭ್ರಷ್ಟಾಚಾರವನ್ನು ನಿರ್ಮೂಲನೆ ಮಾಡಲು ಸರ್ಕಾರ, ನಾಗರಿಕರು ಮತ್ತು ಖಾಸಗಿ ವಲಯದಂತಹ ಎಲ್ಲಾ ಪಾಲುದಾರರು ಒಟ್ಟಾಗಿ ಕೆಲಸ ಮಾಡಬೇಕಾಗುತ್ತದೆಂದು ನಾನು ನಂಬುತ್ತೇನೆ.

ಪ್ರತಿ ನಾಗರಿಕನು ಜಾಗರೂಕನಾಗಿದ್ದು, ಎಲ್ಲಾ ಸಮಯದಲ್ಲೂ ಉನ್ನತ ಗುಣಮಟ್ಟದ ಪ್ರಾಮಾಣಿಕತೆ ಮತ್ತು ನಿಷ್ಠೆಗೆ ಬದ್ಧನಾಗಿರಬೇಕೆಂದು ಹಾಗೂ ಭ್ರಷ್ಟಾಚಾರದ ವಿರುದ್ಧ ಹೋರಾಟವನ್ನು ಬೆಂಬಲಿಸಬೇಕೆಂದು ನಾನು ಅರಿತಿದ್ದೇನೆ.

ಆದ್ದರಿಂದ, ನಾನು ಈ ರೀತಿ ಪ್ರತಿಜ್ಞೆ ಮಾಡುತ್ತೇನೆ :-

* ಜೀವನದ ಎಲ್ಲಾ ಕ್ಷೇತ್ರಗಳಲ್ಲಿ ಪ್ರಾಮಾಣಿಕತೆ ಮತ್ತು ಕಾನೂನಿನ ನಿಯಮಗಳನ್ನು ಅನುಸರಿಸುತ್ತೇನೆ;
* ಲಂಚವನ್ನು ಪಡೆಯುವುದಿಲ್ಲ ಹಾಗೂ ನೀಡುವುದೂ ಇಲ್ಲ;
* ಎಲ್ಲಾ ಕಾರ್ಯಗಳನ್ನು ಪ್ರಾಮಾಣಿಕ ಮತ್ತು ಪಾರದರ್ಶಕ ರೀತಿಯಲ್ಲಿ ನಿರ್ವಹಿಸುತ್ತೇನೆ;
* ಸಾರ್ವಜನಿಕ ಹಿತಾಸಕ್ತಿಯಲ್ಲಿ ಕಾರ್ಯನಿರ್ವಹಿಸುತ್ತೇನೆ;
* ವೈಯಕ್ತಿಕ ನಡವಳಿಕೆಯಲ್ಲಿ ನಿಷ್ಠೆ ಪ್ರದರ್ಶಿಸುವ ಮೂಲಕ ಮಾದರಿಯಾಗಿರುತ್ತೇನೆ;
* ಯಾವುದೇ ಭ್ರಷ್ಟಾಚಾರದ ಘಟನೆಯನ್ನು ಸೂಕ್ತ ಸಂಸ್ಥೆಗೆ ವರದಿ ಮಾಡುತ್ತೇನೆ.

*****

## PLEDGE

I believe that corruption has been one of the major obstables to economic, political and social progress of our country. I belive that all stakeholders such as Government, citizens and private sector need to work together to eradicate corruption.

I realise that every citizen should be vigilant and commit to highest standards of honesty and integrity at all times and support the fight against corruption.

I, therefore, pledge:

- To follow probity and rule of law in all walks of life;
- To neither take nor offer bribe;
- To perform all tasks in an honest and transparent manner;
- To act in public interest;
- To lead by example exhibiting integrity in personal behaviour;
- To report any incident or corruption to the appropriate agency.